**Akashvani : Bangalore**
**Regional Bulletin In Kannada**
**26.07.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.07.2025 / 18.40 hrs**

**<><*<><>*><>**

ಮುಖ್ಯಾಂಶಗಳು

- ಎರಡು ವರ್ಷಗಳಲ್ಲಿ ಎತ್ತಿನಹೊಳೆ ಯೋಜನೆ ಪೂರ್ಣ ; ಅರಸಿಕೆರೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

- ಮಹದಾಯಿ ಯೋಜನೆಗೆ ಶೀಘ್ರವೇ ಅರಣ್ಯ ಇಲಾಖೆಯಿಂದ ಅನುಮತಿ ; ಜಗದೀಶ್ ಶೆಟ್ಟರ್

- ಬೆಂಗಳೂರಿನ ಸುರಂಗ ಯೋಜನೆ, ನಗರ ವಿಭಜನೆ ಕುರಿತಂತೆ ಅಧಿವೇಶನದಲ್ಲಿ ಪ್ರಸ್ತಾಪಿಸಲು ಬಿಜೆಪಿ ತೀರ್ಮಾನ

- ಚಿಕ್ಕಮಗಳೂರಿನ ಬಿದಿರುತಳ ದಟ್ಟಾರಣ್ಯದಲ್ಲಿ ಚಾರಣ ಕೈಗೊಂಡಿದ್ದ ಬೆಂಗಳೂರಿನ ೧೦೩ ಮಂದಿ ಪೊಲೀಸರ ವಶಕ್ಕೆ

- ಜಪಾನ್‌ಗೆ ಸುರಕ್ಷಿತವಾಗಿ ತಲುಪಿದ ಬನ್ನೇರುಘಟ್ಟ ಜೈವಿಕ ಉದ್ಯಾನವನದ ೪ ಆನೆಗಳು

**<><*<><>*><>**

ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ದಿ ಕುಂಠಿತವಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಅರಸೀಕೆರೆಯಲ್ಲಿಂದು ವಿವಿಧ ಅಭಿವೃದ್ದಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು ಇಡೀ ದೇಶದಲ್ಲಿ ತಲಾ ಆದಾಯದಲ್ಲಿ ರಾಜ್ಯ ಮೊದಲ ಸ್ಥಾನ ಪಡೆದುಕೊಂಡಿದ್ದು ಇದಕ್ಕೆ ಗ್ಯಾರಂಟಿ ಯೋಜನೆಗಳೇ ಕಾರಣ ಎಂದು ಹೇಳಿದ್ದಾರೆ. ಗ್ಯಾರಂಟಿ ಯೋಜನೆಗಳು ಮಾತ್ರವಲ್ಲದೆ ೧ ಲಕ್ಷದ ೨೦ ಸಾವಿರ ಕೋಟಿ ಹಣವನ್ನು ಅಭಿವೃದ್ಧಿಗೆ ಸರ್ಕಾರ ಖರ್ಚು ಮಾಡಲು ಮುಂದಾಗಿದೆ. ಬಡವ ಶ್ರೀಮಂತ ಎಂಬ ತಾರತಮ್ಯ ತೊಡೆದು ಹಾಕಿ ಸಮಾನತೆ ಕಾಯ್ದುಕೊಂಡಾಗ ಮಾತ್ರ ಸಮ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯದಲ್ಲಿ ಎತ್ತಿನ ಹೊಳೆ ಯೋಜನೆಯ ಮೊದಲ ಹಂತದ ಕಾಮಗಾರಿ ಪೂರ್ಣಗೊಂಡಿದ್ದು ಎರಡನೇ ಹಂತದ ಕಾಮಗಾರಿ ಆರಂಭವಾಗಿದೆ, ಇನ್ನು ೬ ಸಾವಿರ ಕೋಟಿ ಹಣದ

ಅವಶ್ಯಕತೆ ಇದ್ದು, ಮುಂದಿನ ಸಚಿವ ಸಂಪುಟದಲ್ಲಿ ಹಣ ಬಿಡುಗಡೆ ಮಾಡಿ ಇನ್ನೆರಡು ವರ್ಷದಲ್ಲಿ ಎತ್ತಿನ ಹೊಳೆ ಯೋಜನೆ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

**<><*<><>*><>**

ಮಹದಾಯಿ ಸಮಸ್ಯೆ ಶೀಘ್ರವೇ ಇತ್ಯರ್ಥವಾಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇವಲ ಅನುಷ್ಠಾನ ಕಾರ್ಯ ಮಾತ್ರ ಬಾಕಿ ಉಳಿದಿದ್ದು, ಆದಷ್ಟು ಬೇಗ ಅರಣ್ಯ ಇಲಾಖೆಯಿಂದ ಅನುಮತಿ ಸಿಗಲಿದೆ ಎಂದು ಹೇಳಿದ್ದಾರೆ.

**ಧ್ವನಿ : ಜಗದೀಶ್ ಶೆಟ್ಟರ್**

**<><*<><>*><>**

ಮುಂಬರುವ ವಿಧಾನಸಭೆ ಅಧಿವೇಶನದಲ್ಲಿ ರಾಜ್ಯ ಸರ್ಕಾರದ ವೈಫಲ್ಯಗಳನ್ನು ಎತ್ತಿ ಹಿಡಿಯುವ ಕುರಿತಂತೆ ಬೆಂಗಳೂರಿನಲ್ಲಿಂದು ಬಿಜೆಪಿ ಹಿರಿಯ ಶಾಸಕರ ಸಭೆ ನಡೆಯಿತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕ ಆರ್. ಅಶೋಕ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಬಿಬಿಎಂಪಿಯನ್ನು ೫ ಭಾಗಗಳನ್ನಾಗಿ ವಿಭಜನೆ ಮಾಡಲು ಹೊರಟಿರುವ ನಿರ್ಧಾರ ಸೇರಿದಂತೆ ಹಲವು ಸಮಸ್ಯೆಗಳ ಕುರಿತು ಚರ್ಚಿಸಲಾಗಿದೆ. ಅಧಿವೇಶನದಲ್ಲಿ ಸುರಂಗ ಯೋಜನೆ, ನಗರ ವಿಭಜನೆ ಬಗ್ಗೆ ಧ್ವನಿ ಎತ್ತಲು ನಿರ್ಧರಿಸಲಾಗಿದೆ. ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ ಸುರಂಗ ರಸ್ತೆಯನ್ನು ಮೆಟ್ರೋ ಮಾರ್ಗದ ಕೆಳಗೆ ನಿರ್ಮಿಸಿದರೆ ಬೆಂಗಳೂರಿನ ಸುರಕ್ಷತೆಗೆ ಧಕ್ಕೆ ಬರಲಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಮುಂಗಾರು ಆರಂಭವಾಗಿದ್ದರು, ರಾಜ್ಯ ಸರ್ಕಾರ ಹಾಗೂ ಕೃಷಿ ಸಚಿವರು ಯಾವುದೇ ತಯಾರಿ ಮಾಡಿಕೊಳ್ಳದ ಹಿನ್ನೆಲೆಯಲ್ಲಿ ರೈತರು ಬೀದಿಗಿಳಿದು ಹೋರಾಟ ನಡೆಸುವಂತಾಗಿದೆ ಎಂದು ಆರೋಪಿಸಿದ್ದಾರೆ.

**<><*<><>*><>**

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಮಾನವೀಯ ಸೇವೆಯ ಪ್ರತೀಕವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಶ್ಲಾಘಿಸಿದ್ದಾರೆ. ಮಂಗಳೂರಿನಲ್ಲಿಂದು ರೆಡ್‌ಕ್ರಾಸ್ ಶತಮಾನೋತ್ಸವ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ದೇಶಾದ್ಯಂತ ರೆಡ್‌ಕ್ರಾಸ್ ಉತ್ತಮ ಸೇವೆಯನ್ನು ನೀಡುತ್ತಾ ಬಂದಿದೆ. ಕೋವಿಡ್ ಕಷ್ಟಕರ ಕಾಲದಲ್ಲಿ ರೆಡ್‌ಕ್ರಾಸ್‌ನ ಮಾನವೀಯ ಸೇವೆಯನ್ನು ಮರೆಯಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಅವರು, ರೆಡ್‌ಕ್ರಾಸ್ ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಿದರು. ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಶಾಸಕ ವೇದವ್ಯಾಸ ಕಾಮತ್, ರೆಡ್‌ಕ್ರಾಸ್ ರಾಜ್ಯ ಘಟಕದ ಉಪಾಧ್ಯಕ್ಷ ಭಾಸ್ಕರ ರಾವ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ

ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಬಿದಿರುತಳ ದಟ್ಟಾರಣ್ಯದಲ್ಲಿ ಚಾರಣ ಕೈಗೊಂಡಿದ್ದ ಬೆಂಗಳೂರು ಮೂಲದ ಸುಮಾರು ೧೦೩ ಖಾಸಗಿ ಸಂಸ್ಥೆಯ ಉದ್ಯೋಗಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬಿದಿರುತಳ ಅರಣ್ಯ ಪ್ರದೇಶದಲ್ಲಿ ಚಾರಣ ಮಾಡುವುದನ್ನು ನಿಷೇಧಿಸಲಾಗಿದೆ. ಆದರು ಈ ಪ್ರವಾಸಿಗರು ಯಾವುದೇ ಅನುಮತಿ ಇಲ್ಲದೆ, ಪೊಲೀಸ್, ಅರಣ್ಯ ಇಲಾಖೆಗೆ ಮಾಹಿತಿ ನೀಡದೆ ಚಾರಣ ಕೈಗೊಂಡಿದ್ದರು. ಈ ಬಗ್ಗೆ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಬಾಳೂರು ಹಾಗು ಬಣಕಲ್ ಠಾಣೆಯ ಪೊಲೀಸರು ಚಾರಣಿಗರನ್ನು ವಶಕ್ಕೆ ಪಡೆದು ವಿಚಾರuಗೆ ಒಳಪಡಿಸಿದ್ದಾರೆ. ಬಿದಿರುತಳ ಅರಣ್ಯ ಪ್ರದೇಶವು ಚಾರ್ಮಾಡಿ ಘಾಟ್‌ಗೆ ಹೊಂದಿಕೊಂಡ ದಟ್ಟಾರಣ್ಯವಾಗಿದೆ. ಈ ಭಾಗದಲ್ಲಿ ಹೆಚ್ಚಿನ ಗಾಳಿ ಮಳೆಯಾಗುತ್ತಿದ್ದು, ಮರಗಳು ಬೀಳುವ ಹಾಗೂ ಭೂ ಕುಸಿತ ಉಂಟಾಗುವ ಅಪಾಯಗಳಿವೆ.

<><*<><>*><>

ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಜಿಲ್ಲೆಯ ಅಲ್ಲಲ್ಲಿ ಮರ ಬಿದ್ದ ಪ್ರಕರಣಗಳು ವರದಿಯಾಗಿದೆ. ಮಡಿಕೇರಿ-ಸುಂಟಿಕೊಪ್ಪ ರಾಷ್ಟ್ರೀಯ ಹೆದ್ದಾರಿಯಲ್ಲಿ ಮರ ರಸ್ತೆಗೆ ಬಿದ್ದ ಪರಿಣಾಮ ಕೆಲಕಾಲ ಹೆದ್ದಾರಿಯಲ್ಲಿ ವಾಹನಗಳ ಸಂಚಾರ ನಿಲುಗಡೆಗೊಂಡಿತ್ತು. ಕಾವೇರಿ, ಲಕ್ಷ್ಮಣತೀರ್ಥ ನದಿಗಳಲ್ಲಿಯೂ ನೀರಿನ ಹರಿಯುವಿಕೆಯಲ್ಲಿ ಏರಿಕೆಯಾಗಿದೆ. ಮಡಿಕೇರಿ ಸೇರಿದಂತೆ ಜಿಲ್ಲೆಯ ಬಹುತೇಕ ಕಡೆ ಬಿರುಗಾಳಿಯಿಂದಾಗಿ ವಿದ್ಯುತ್ ಕಂಬಗಳು ಬಿದ್ದು ವಿದ್ಯುತ್ ಸಂಪರ್ಕ ವ್ಯತ್ಯಯವಾಗಿದೆ. ಹಾರಂಗಿ ಜಲಾಶಯಕ್ಕೂ ಹೆಚ್ಚಿನ ಪ್ರಮಾಣದಲ್ಲಿ ನೀರಿನ ಒಳಹರಿವಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿಯೂ ಗಾಳಿ ಸಹಿತ ಮಳೆಯಾಗುತ್ತಿದೆ. ಹೆಚ್ಚಿನ ಮಳೆಯಿಂದಾಗಿ ತುಂಗಾ, ಭದ್ರಾ, ಹೇಮಾವತಿ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ.ಶೃಂಗೇರಿ ದೇವಾಲಯದ ಸಮೀಪದ ವಾಹನಗಳ ನಿಲುಗಡೆ ಸ್ಥಳಕ್ಕೆ ತುಂಗಾ ನದಿ ನೀರು ನುಗ್ಗಿ ಜಲಾವೃತಗೊಂಡಿದೆ. ಚಿಕ್ಕಮಗಳೂರು ನಗರದಲ್ಲಿ ಸತತ ಮಳೆಯಿಂದ ಜನ ಜೀವನ ಅಸ್ತ ವ್ಯಸ್ತಗೊಂಡಿದೆ. ಗದಗ ಜಿಲ್ಲೆಯಲ್ಲಿ ಸತತವಾಗಿ ಬಿದ್ದ ಮಳೆಯಿಂದ ಈರುಳ್ಳಿ ಬೆಳೆಯಲ್ಲಿ ಎಲೆ ಮಚ್ಚೆ ರೋಗ ಹಾಗೂ ಸುರಳಿ ರೋಗಗಳ ಬಾಧೆ ಕಂಡು ಬಂದಿದೆ. ಶಿಲೀಂದ್ರಗಳ ಬಾಧೆ, ಅತಿ ಹೆಚ್ಚಿನ ತೇವಾಂಶ ಹಾಗೂ ಬೋರಾನ್ ಕೊರತೆಯಿಂದ ಸುರಳಿರೋಗ ಕಾಣಿಸಿಕೊಳ್ಳುತ್ತದೆ. ಇದರ ಹತೋಟಿಗಾಗಿ ರೈತರು ಹೊಲದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಹಾಗೂ ಸಕಾಲದಲ್ಲಿ ಕಳೆಗಳ ನಿಯಂತ್ರಣ ಮಾಡಬೇಕೆಂದು ಕೃಷಿ ಇಲಾಖೆ ಮನವಿ ಮಾಡಿದೆ.

<><*<><>*><>

ಇದೇ ಮೊದಲ ಬಾರಿಗೆ ಅಂತಾರಾಷ್ಟ್ರೀಯ ವರ್ಗಾವಣೆಯಲ್ಲಿ ಬನ್ನೇರುಘಟ್ಟ ಜೈವಿಕ ಉದ್ಯಾನವನದಿಂದ ನಾಲ್ಕು ಆನೆಗಳನ್ನು ಜಪಾನ್‌ಗೆ ಯಶಸ್ವಿಯಾಗಿ ಸ್ಥಳಾಂತರಿಸಲಾಗಿದೆ. ೮ ಘಂಟೆಗಳಿಗೂ ಹೆಚ್ಚು ಕಾಲ ಪ್ರಯಾಣದ ಬಳಿಕ ಅಲ್ಲಿ ಅವು, ಹೊಸ ಪರಿಸರಕ್ಕೆ ಹೊಂದಿಕೊಳ್ಳಲು

ಪ್ರಯತ್ನಿಸುತ್ತಿದೆ. ಸುರೇಶ್, ಗೌರಿ, ಶ್ರುತಿ, ತುಳಸಿ ಎಂಬ ನಾಲ್ಕು ಆನೆಗಳನ್ನು ಜಪಾನ್‌ನ ಒಸಕಾದ ಕನ್ಸೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕತಾರ್ ಏರ್‌ವೇಸ್ ಸರಕು ವಿಮಾನದಲ್ಲಿ ಸಾಗಿಸಲಾಗಿತ್ತು. ಇಬ್ಬರು ಪಶುವೈದ್ಯಕೀಯ ಅಧಿಕಾರಿಗಳು, ನಾಲ್ವರು ಮಾವುತರು, ಮೇಲ್ವಿಚಾರಕರು ಹಾಗೂ ಜೀವ ಶಾಸ್ತ್ರಜ್ಞರನ್ನು ಒಳಗೊಂಡ ತಂಡವು ಆನೆಗಳು ಹೊಸ ಪರಿಸರಕ್ಕೆ ಹೊಂದಿಕೊಳ್ಳಲು ಸಹಾಯವಾಗುವಂತೆ ೧೫ ದಿನಗಳ ಕಾಲ ಜಪಾನ್‌ನಲ್ಲಿ ಉಳಿಯಲಿದೆ.

**<><*<><>*><>**

ರಾಜ್ಯದಲ್ಲಿ ೧೭೭ ಆರ್ಥಿಕ ಸಾಕ್ಷರತಾ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ಕರ್ನಾಟಕ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಕೆನರಾ ಬ್ಯಾಂಕ್‌ನ ವಿಭಾಗೀಯ ಪ್ರಬಂಧಕ ಪ್ರದೀಪ್‌ಕುಮಾರ್ ಎಚ್. ಹೇಳಿದ್ದಾರೆ. ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ಎಲ್ಲಾ ಜಿಲ್ಲೆಯ ಲೀಡ್‌ಬ್ಯಾಂಕ್ ವ್ಯವಸ್ಥಾಪಕರು ಆರ್ಥಿಕ ಪರಿಪೂರ್ಣತಾ ಅಭಿಯಾನ ನಡೆಸಲಿದ್ದಾರೆ. ಈ ಮೂಲಕ ಗ್ರಾಮಪಂಚಾಯತ್‌ನಲ್ಲಿ ಮೂರು ತಿಂಗಳ ಕಾಲ ಅಭಿಯಾನ ನಡೆಯಲಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲ್ಲೂಕಿನ ಅರಳಿಗನೂರು ಕಡೆಯಿಂದ ಸಿರುಗುಪ್ಪ ಪಟ್ಟಣದ ಕಡೆಗೆ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಣಿಕೆ ಮಾಡುತ್ತಿದ್ದ ಮೂರು ವಾಹನಗಳನ್ನು ಜಪ್ತಿ ಮಾಡಲಾಗಿದೆ. ಸುಮಾರು ೩೮೫ ಅಕ್ಕಿ ಚೀಲಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಿರುಗುಪ್ಪ ತಾಲ್ಲೂಕಿನ ಆಹಾರ ನಿರೀಕ್ಷಕ ಎಂ.ವಿಜಯ್ ಕುಮಾರ್ ತಿಳಿಸಿದ್ದಾರೆ. ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣದ ದಾಖಲಾಗಿದೆ.

**<><*<><>*><>**

ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ ದಿವಸ ಆಚರಿಸಲಾಯಿತು. ಬೆಳಗಾವಿಯಲ್ಲಿ ಇಂದು ಆಯೋಜಿಸಲಾದ ಕಾರ್ಗಿಲ್ ವಿಜಯೋತ್ಸವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪಾಲ್ಗೊಂಡಿದ್ದರು. ಧಾರವಾಡದ ಜಿಲ್ಲಾಧಿಕಾರಿ ಕಚೇರಿ ಕಂಪೌಂಡ್‌ನಲ್ಲಿರುವ ಕಾರ್ಗಿಲ್ ಸ್ತೂಪಕ್ಕೆ ಮಾಜಿ ಹಾಗೂ ಹಾಲಿ ಸೈನಿಕರು ಗೌರವ ಸಲ್ಲಿಸಿ, ಕಾರ್ಗಿಲ್ ಯುದ್ಧದಲ್ಲಿ ವೀರ ಮರಣ ಹೊಂದಿದ ಸೈನಿಕರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಕಾರ್ಗಿಲ್ ಯುದ್ಧ ಗೆದ್ದ ನಂತರ ಇಡೀ ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಧಾರವಾಡದಲ್ಲಿ ಈ ಕಾರ್ಗಿಲ್ ಸ್ತೂಪ ನಿರ್ಮಾಣವಾಗಿತ್ತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**